ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು
ನೂರ ನಲವತ್ತನೆಯ ಅಧಿವೇಶನ
ಬುಧವಾರ, ದಿನಾಂಕ : 18 ನೇ ಮಾರ್ಚ್, 2020

ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಅಂಬೇಡ್ಕರ್ ಭವನದ ಬಗ್ಗೆ

ಶ್ರೀ ಐವನ್ ಡಿ'ಸೋಜಾ (ನಾಮನಿರ್ದೇಶನ ಹೊಂದಿದವರು) :-

1126 (1349) ಮಾನ್ಯ ಉಪ ಮುಖ್ಯಮಂತ್ರಿಗಳು ಹಾಗೂ ಲೋಕೋಪಯೋಗಿ ಮತ್ತು ಸಮಾಜ ಕಲ್ಯಾಣ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಅಂಬೇಡ್ಕರ್ ಭವನ ನಿರ್ಮಾಣಗೊಂಡಿದ್ದರೂ ಅದನ್ನು ಸಾರ್ವಜನಿಕರ ಉಪಯೋಗಕ್ಕೆ ನೀಡದಿರಲು ಕಾರಣಗಳೇನು ; (ವಿವರ ನೀಡುವುದು) ಇದನ್ನು ಸಾರ್ವಜನಿಕರಿಗೆ ಯಾವಾಗ ಅರ್ಪಿಸಲಾಗುವುದು ;

(ಆ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳಲ್ಲಿ ಮೂಲಭೂತ ಸೌಕರ್ಯಗಳ ಕೊರತೆ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ರಾಜ್ಯದ ಹಾಸ್ಟೆಲ್‌ಗಳಲ್ಲಿ ಬಿಸಿ ನೀರಿನ ವ್ಯವಸ್ಥೆಯನ್ನು ನೀಡದಿರುವ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; ಕೈಗೊಂಡ ಕ್ರಮವೇನು? (ವಿವರ ನೀಡುವುದು)